ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆಃ **1506/2024**

ಪಿರ್ಯಾದಿ : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,

ವಿರುದ್ಧ

ಆರೋಪಿ : ಅನಿಲ.ಟಿ.ಬಿ, ವಯಸ್ಸು ಸುಮಾರು 31 ವರ್ಷ,
ಬಿನ್ ಬೊಮ್ಮಯ್ಯ, ವಾಸಃ ತಳವಾರ ಗ್ರಾಮ,
ಕುಂದೂರು ಅಂಚೆ, ಮೂಡಿಗೆರೆ ತಾಲ್ಲೂಕು.

ದೋಷಾರೋಪಣೆ

ಶ್ರೀ. ವಿಶ್ವನಾಥ್ ಎ., C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕಃ 06.04.2024 ರಂದು ರಾತ್ರಿ ಸುಮಾರು 9.00 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಬಿ.ಹೊಸಹಳ್ಳಿ ಗ್ರಾಮದ ಚಾಸಾ1-ಅಣ್ಣಪ್ಪ ರವರ ವಾಸದ ಮನೆಯ ಮುಂಭಾಗದಲ್ಲಿ ಆರೋಪಿಯಾದ ನೀವು ಅವರ ಮಗಳಾದ ಚಾಸಾ6-ಸುನೀತಾಳ ಬಳಿ ಖರ್ಚಿಗೆ ಹಣವನ್ನು ಕೊಡುವಂತೆ ಪೀಡಿಸುತ್ತಿದ್ದು, ಹಣ ಕೊಡದಿದ್ದಕ್ಕೆ ಚಾಸಾ6 ರವರಿಗೆ ಬೇವರ್ಸಿ ಮುಂಡೆ ಎಂದು ಆವಾಚ್ಯ ಶಬ್ಧಗಳಿಂದ ಬೈಯ್ದು ಹೊಡೆಯಲು ಮುಂದಾದಾಗ ಅಲ್ಲಿಯೇ ಇದ್ದ ಚಾಸಾ1 ರವರು ಕೇಳಿ ತಡೆಯಲು ಪ್ರಯತ್ನಿಸಿದಾಗ, ಅವರಿಗೆ ಬೋಳಿಮಗನೇ ನೀನು ಯಾರು ಎಂದು ಅವಾಚ್ಯ ಶಬ್ಧಗಳಿಂದ ಬೈದು ಅವಮಾನ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಕೇಳಲು ಬಂದ ಚಾಸಾ-1 ರವರಿಗೆ ಮುಷ್ಟಿಯಿಂದ ಬೆನ್ನಿಗೆ ಗುದ್ದಿ ನೋವುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **323** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ-1 ರವರಿಗೆ ಅಕೇಶಿಯಾ ಮರದ ದೊಣ್ಣೆಯಿಂದ ಎಡಕೈನ ಮೊಣಕೈಗೆ ಹೊಡೆದು ತೀವ್ರ ಸ್ವರುಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **326** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**4.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ1 ರವರಿಗೆ ಕೊಲೆ ಮಾಡುವುದಾಗಿ ಕೊಲೆಬೆದರಿಕೆ ಹಾಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **506** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ*?* ಅವುಗಳು ನಿಮಗೆ ಅರ್ಥವಾಯಿತೇ*?*

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ*?*

ಆರೋಪಿಯ ಉತ್ತರಃ

*(ಆರೋಪಿಗೆ ದಿನಾಂಕ 21.11.2024 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 21.11.2024

C/c ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.